## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಚಿಕ್ಕಬಳ್ಳಾಪುರ ಜಿಲ್ಲೆ ಚಿಂತಾಮಣಿ ತಾಲ್ಲೂಕು ಪಂಚಾಯತಿಯಲ್ಲಿ ಎಂಜಿಎನ್‌ಆರ್‌ಇಜಿಎ ಯೋಜನೆಯಡಿ 2009-10, 2010-11ನೇ ಸಾಲಿನಲ್ಲಿ ಆಡಳಿತ ವೆಚ್ಚದಲ್ಲಿ ರೂ. 38,77,667/- ಮೌಲ್ಯದ ಸಾಮಗ್ರಿಗಳನ್ನು ಖರೀದಿಸಿರುವ ಅವ್ಯವಹಾರದಲ ಭಾಗಿಯಾಗಿರುವ ಅಧಿಕಾರಿ/ನೌಕರರುಗಳ ವಿರುದ್ಧ ಜಂಟಿ ಇಲಾಖಾ ವಿಚಾರಣೆ ಜರುಗಿಸಲು ವಿಚಾರಣಾಧಿಕಾರಿ ಮತ್ತು ಮಂಡನಾಧಿಕಾರಿಯನ್ನು ನೇಮಕಾತಿ ಮಾಡುವ ಬಗ್ಗೆ.

ಓದಲಾಗಿದೆ: 1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿಕ್ಕಬಳ್ಳಾಪುರ ರವರ ಪತ್ರ ಸಂಖ್ಯೆ:ಜಿಪಂಚಿ:/ಆಡಳಿತ :ಸಿಬ್ಬಂದಿ-1/ಸಿಆರ್:09: 2012-13 ದಿನಾಂಕ:29-10-2013

2. ಸರ್ಕಾರದ ಕಾರಣ ಕೇಳುವ ನೋಟೀಸು ದಿ:27-1-2014

3. ಆಪಾದಿತ ಅಧಿಕಾರಿ/ನೌಕರರು ಸಲ್ಲಿಸಿರುವ ಲಿಖಿತ ಹೇಳಿಕೆಗಳು. ದಿನಾಂಕ: 10.02.2014,14.02.2014, 11.02.2014, 14.03.2014

------

**ಪ್ರಸ್ತಾವನೆ:**

ಚಿಕ್ಕಬಳ್ಳಾಪುರ ಜಿಲ್ಲೆ ಚಿಂತಾಮಣಿ ತಾಲ್ಲೂಕು ಪಂಚಾಯತಿಯಲ್ಲಿ ಮಹಾತ್ಮಾಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ 2009-10, 2010-11ನೇ ಸಾಲಿನಲ್ಲಿ ಆಡಳಿತ ವೆಚ್ಚದಲ್ಲಿ ರೂ. 38,77,667/- ಮೌಲ್ಯದ ಸಾಮಗ್ರಿಗಳನ್ನು ಖರೀದಿಸಿರುವ ಅವ್ಯವಹಾರದಲ್ಲಿ ಭಾಗಿಯಾಗಿರುವ ಈ ಕೆಳಕಂಡ ಅಧಿಕಾರಿ/ ನೌಕರರುಗಳಾದ :-

1. ಶ್ರೀ ಕೆ.ವಿ ರೆಡ್ಡೆಪ್ಪ, ಹಿಂದಿನ ಕಾರ್ಯನಿರ್ವಹಣಾಧಿಕಾರಿ, ತಾಲ್ಲೂಕು ಪಂಚಾಯತಿ ಚಿಂತಾಮಣಿ
2. ಶ್ರೀಮತಿ ಎಸ್.ವಿ. ರೇಣುಕಾ, ಹಿಂದಿನ ಲೆಕ್ಕಾಧಿಕಾರಿ, ತಾಲ್ಲೂಕು ಪಂಚಾಯತಿ ಚಿಂತಾಮಣಿ
3. ಶ್ರೀಮತಿ ಎಂ.ಪರಂಜ್ಯೋತಿ, ಹಿಂದಿನ ಪ್ರಥಮ ದರ್ಜೆ ಸಹಾಯಕಿ ತಾಲ್ಲೂಕು ಪಂಚಾಯತಿ, ಚಿಂತಾಮಣಿ
4. ಶ್ರೀ ಎಂ. ರವಿ, ಹಿಂದಿನ ಪ್ರಥಮ ದರ್ಜೆ ಸಹಾಯಕ ತಾಲ್ಲೂಕು ಪಂಚಾಯತಿ, ಚಿಂತಾಮಣಿ

ಇವರುಗಳಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ). 1957ರ ನಿಯಮ 11ರಡಿ ಶಿಸ್ತು ಕ್ರಮ ಜರುಗಿಸಲು ಮೇಲೆ ಓದಲಾದ ಕ್ರಮಸಂಖ್ಯೆ (2) ರಲ್ಲಿ ಸರ್ಕಾರದ ನೋಟೀಸ್‌ನಲ್ಲಿ ಅನುಬಂಧ-1 ರಿಂದ 4ನ್ನು ಒಳಗೊಂಡ-ದೋಷಾರೋಪಣಾ ಪಟ್ಟಿಯೊಂದಿಗೆ ಕಾರಣ ಕೇಳುವ ನೋಟೀಸ್‌ನ್ನು ಜಾರಿಮಾಡಲಾಗಿತ್ತು. ಸದರಿ ನೋಟೀಸಿಗೆ ಅಪಾದಿತ ಅಧಿಕಾರಿ/ನೌಕರರುಗಳು ಮೇಲೆ ಓದಲಾದ ಕ್ರಮಸಂಖ್ಯೆ (3) ರಲ್ಲಿ ಲಿಖಿತ ಹೇಳಿಕೆಗಳನ್ನು ಸಲ್ಲಿಸಿ ಅವರ ವಿರುದ್ಧದ ಆರೋಪವನ್ನು ನಿರಾಕರಿಸಿ ಆರೋಪಗಳನ್ನು ಕೈಬಿಡಲು ಕೋರಿರುತ್ತಾರೆ. ಸದರಿ ಅಪಾದಿತ ಅಧಿಕಾರಿ/ನೌಕರರುಗಳು ಸಲ್ಲಿಸಿರುವ ಲಿಖಿತ ಹೇಳಿಕೆಗಳನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿದ್ದು, ಅವರುಗಳು ಸಲ್ಲಿಸಿರುವ ವಿವರಣೆಗಳು ಸಮರ್ಥನೀಯವಾಗಿರುವುದಿಲ್ಲವಾದ್ದರಿಂದ ಸದರಿ ಅಧಿಕಾರಿ/ನೌಕರರುಗಳ ವಿರುದ್ಧದ ಆರೋಪಗಳ ಸತ್ಯಾಸತ್ಯತೆಯನ್ನು ತಿಳಿಯಲು ಜಂಟಿ ಇಲಾಖಾ ವಿಚಾರಣೆಯನ್ನು ನಡೆಸಲು ಸರ್ಕಾರವು ನಿರ್ಧರಿಸಿ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 82 ವಿಸೇಚಿ 2011 ಬೆಂಗಳೂರು, ದಿನಾಂಕ:09-04-2014.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಈ ಕೆಳಕಂಡ ಅಧಿಕಾರಿ/ನೌಕಕರುಗಳಾದ:-

1. ಶ್ರೀ ಕೆ.ವಿ ರೆಡ್ಡೆಪ್ಪ, ಹಿಂದಿನ ಕಾರ್ಯನಿರ್ವಹಣಾಧಿಕಾರಿ, ತಾಲ್ಲೂಕು ಪಂಚಾಯತಿ ಚಿಂತಾಮಣಿ
2. ಶ್ರೀಮತಿ ಎಸ್.ವಿ. ರೇಣುಕಾ, ಹಿಂದಿನ ಲೆಕ್ಕಾಧಿಕಾರಿ, ತಾಲ್ಲೂಕು ಪಂಚಾಯತಿ ಚಿಂತಾಮಣಿ

3. ಶ್ರೀಮತಿ ಎಂ.ಪರಂಜ್ಯೋತಿ, ಹಿಂದಿನ ಪ್ರಥಮ ದರ್ಜೆ ಸಹಾಯಕಿ ತಾಲ್ಲೂಕು ಪಂಚಾಯತಿ, ಚಿಂತಾಮಣಿ
4. ಶ್ರೀ ಎಂ. ರವಿ, ಹಿಂದಿನ ಪ್ರಥಮ ದರ್ಜೆ ಸಹಾಯಕ ತಾಲ್ಲೂಕು ಪಂಚಾಯತಿ, ಚಿಂತಾಮಣಿ

ಇವರುಗಳ ವಿರುದ್ಧ ಮಾಡಿರುವ ಆರೋಪಗಳ ಬಗ್ಗೆ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ). ನಿಯಮಾವಳಿಗಳು 1957ರ ನಿಯಮ 11 ರ ಅನುಸಾರ ಇಲಾಖಾ ವಿಚಾರಣಾ ನಡೆಸಲು ಸದರಿ ನಿಯಮಾವಳಿಗಳ ನಿಯಮ 13ರ ಅಡಿಯಲ್ಲಿ ಜಂಟಿ ಇಲಾಖಾ ವಿಚಾರಣೆಗೆ ಆದೇಶಿಸಿದೆ.

ಈ ಇಲಾಖಾ ವಿಚಾರಣೆ ನಡೆಸಲು ಶ್ರೀ ಎನ್. ಸುಬ್ಬರಾವ್, ನಿವೃತ್ತ ನ್ಯಾಯಾಧೀಶರು, ಬೆಂಗಳೂರು, ಇವರನ್ನು ವಿಚಾರಣಾಧಿಕಾರಿಯಾಗಿ ಮತ್ತು ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತಿ, ಚಿಕ್ಕಬಳ್ಳಾಪುರ ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಿದೆ.

ವಿಚಾರಣಾಧಿಕಾರಿಯವರು ಈ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 11 ರಲ್ಲಿ ನಿಗದಿ ಪಡಿಸಿರುವ ಕಾರ್ಯವಿಧಾನದ ಪ್ರಕಾರ ವಿಚಾರಣೆ ಜರುಗಿಸಿ ವರದಿಯನ್ನು ಮೂರು ತಿಂಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ನಿಯಮಾನುಸಾರ ನಿಗದಿತ ಸಂಭಾವನೆಯನ್ನು ಪಡೆಯಲು ಅರ್ಹರಿರುತ್ತಾರೆ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೆಂಗಳೂರು ಗ್ರಾಮಾಂತರ ಇವರು ವಿಚಾರಣಾಧಿಕಾರಿಯವರಿಗೆ ಅಗತ್ಯ ಸೌಲಭ್ಯಗಳನ್ನು ಒದಗಿಸಲು ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಚಂದ್ರಶೇಖರ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:
1. ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿಕ್ಕಬಳ್ಳಾಪುರ/ ಬೆಂಗಳೂರು(ಗ್ರಾ)
3. ಶ್ರೀ ಎನ್. ಸುಬ್ಬರಾವ್, ನಿವೃತ್ತ ನ್ಯಾಯಾಧೀಶರು, (ವಿಚಾರಣಾಧಿಕಾರಿ), ಮನೆ ನಂ. 1033, 9ನೇ ಮೇನ್, 8ನೇ ಕ್ರಾಸ್, ನ್ಯಾಯಾಂಗ್ ಬಡಾವಣೆ, ಜಿಕೆವಿಕೆ ಅಂಚೆ, ಬೆಂಗಳೂರು-65 (ಮೋಬೈಲ್ ನಂ. 9845433376).
4. ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತಿ, ಚಿಕ್ಕಬಳ್ಳಾಪುರ (ಮಂಡನಾಧಿಕಾರಿ).
5. ಸಂಬಂಧಿಸಿದ ಅಧಿಕಾರಿಗಳಿಗೆ.( ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿಕ್ಕಬಳ್ಳಾಪುರ ಇವರ ಮುಖಾಂತರ)

ಪ್ರತಿಯನ್ನು:
1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಸರ್ಕಾರದ ಕಾರ್ಯದರ್ಶಿ (ಪಂ.ರಾಜ್) /ಅಪರ ಕಾರ್ಯದರ್ಶಿ (ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರು.
2. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
3. ಮಾಹಿತಿ ಕೇಂದ್ರ / ಶಾಖಾ ರಕ್ಷಕ ಕಡತ / ಹೆಚ್ಚುವರಿ ಪ್ರತಿ.